ದಿನಾಂಕ: 18-11-2010ರಂದು ಅಪರಾಹ್ನ:03 -00 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯತ್, ಹಾಸನ ಇಲ್ಲಿ ನಡೆದ ಜಿಲ್ಲಾ ಪಂಚಾಯತ್ ತುರ್ತು ಸಭೆಯ ನಡವಳಿಗಳು

ಅಧ್ಯಕ್ಷತೆ: ಶ್ರೀಮತಿ ಮಹದೇವಮ್ಮ,

ಅಧ್ಯಕ್ಷರು,

ಜಿಲ್ಲಾ ಪಂಚಾಯತ್, ಹಾಸನ.

ಹಾಜರಿ: 32

ಗೈರು ಹಾಜರಿ: 25

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರು ಸಭೆಗೆ ಮಾನ್ಯ ಅಧ್ಯಕ್ಷರು, ಮಾನ್ಯ ಉಪಾಧ್ಯಕ್ಷರು, ಮಾನ್ಯ ವಿಧಾನಸಭಾ ಸದಸ್ಯರು, ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರು, ತಾಲ್ಲೂಕು ಪಂಚಾಯಿತಿ ಅಧ್ಯಕ್ಷರು, ಜಿಲ್ಲಾ ಮಟ್ಟದ ಅಧಿಕಾರಿಗಳು, ಪತ್ರಿಕಾ ಮಾಧ್ಯಮದವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆ ವಹಿಸಿ ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಧ್ಯಕ್ಷರನ್ನು ಕೋರಿದರು. | |
| 1 | ಜಿಲ್ಲೆಯಲ್ಲಿ ಪ್ರಕೃತಿ ವಿಕೋಪದಡಿ ಉಂಟಾಗಿರುವ ನಷ್ಟಕ್ಕೆ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲೆಯಲ್ಲಿ 01-01-2010ರಿಂದ 16-11-2010ರವರೆಗೆ 8 ತಾಲ್ಲೂಕುಗಳಲ್ಲಿ ವಾಡಿಕೆ ಮಳೆ 928.10 ಮಿ.ಮೀಗಳಾಗಿದ್ದು, ಸದರಿ ದಿನಾಂಕದವರೆಗೆ 1261.40 ಮಿ.ಮೀ ಮಳೆಯಾಗಿದೆ. ದಿನಾಂಕ: 01-11-2010ರಿಂದ 16-11-2010ರವರೆಗೆ ವಾಡಿಕೆ ಮಳೆ 14.8 ಮಿ.ಮೀ ಆಗಿದ್ದು, ಸದರಿ ದಿನಾಂಕದವರೆಗೆ 178.2 ಮಿ.ಮೀ ಮಳೆಯಾಗಿದೆ. ಅತಿ ಹೆಚ್ಚು ಮಳೆಯಿಂದಾಗಿ ಬೆಳೆ ಜಾನುವಾರು, ಮನೆ ಮೂಲಭೂತ ಸೌಕರ್ಯಗಳು ಹಾನಿಗೆ ಕಾರಣವಾಗಿರುತ್ತದೆ.<br>• ಅತಿವೃಷ್ಟಿಯಿಂದಾಗಿ ಜಿಲ್ಲೆಯಲ್ಲಿ 6 ಜನರು ಸಾವನ್ನಪ್ಪಿರುತ್ತಾರೆ.<br>• ಜಿಲ್ಲೆಯಲ್ಲಿ ಸುಮಾರು 600 ಕಿ.ಮೀ ರಸ್ತೆಗಳು ಹಾಳಾಗಿರುತ್ತವೆ.<br>• ಜಿಲ್ಲೆಯಲ್ಲಿ ಸುಮಾರು 312 ಕೆರೆಗಳಿಗೆ ಹಾನಿಯಾಗಿರುತ್ತದೆ.<br>• ಜಿಲ್ಲೆಯಲ್ಲಿ 1201 ಮನೆಗಳು ಪೂರ್ಣ ಅಥವಾ ಭಾಗಶ: ಹಾಳಾಗಿರುತ್ತವೆ.<br>• 9227 ಹೆಕ್ಟೇರ್ ಪ್ರದೇಶದಲ್ಲಿ ವಿವಿಧ ಬೆಳೆಗಳು ನಾಶವಾಗಿರುತ್ತವೆ.<br>• ಸುಮಾರು 4800 ಕೋಳಿಗಳು ಮತ್ತು 39 ವಿವಿಧ ಜಾನುವಾರುಗಳು ಸಾವನ್ನಪ್ಪಿರುತ್ತವೆ. | ಸಭೆಯಲ್ಲಿ ಪ್ರಕೃತಿ ವಿಕೋಪದಡಿ ಹಾನಿಯಾಗಿರುವ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಹಾಸನ ಜಿಲ್ಲೆಯಲ್ಲಿ 2010-11ನೇ ಸಾಲಿನಲ್ಲಿ ಅತಿವೃಷ್ಟಿಯಿಂದ ರಸ್ತೆ, ಸೇತುವೆ, ಕೆರೆ, ಮನೆಗಳು, ಶಾಲಾ ಕಟ್ಟಡಗಳು ಮತ್ತು ಅಂಗನವಾಡಿ ಕಟ್ಟಡಗಳು ಹಾನಿಯಾಗಿದ್ದು, ಇದಕ್ಕೆ ಸಂಬಂಧಿಸಿದಂತೆ, ಜಿಲ್ಲೆಗೆ ಒಟ್ಟು ರೂ.60.00ಕೋಟಿಗಳ ಪರಿಹಾರವನ್ನು ನೀಡುವಂತೆ ಸರ್ಕಾರವನ್ನು ಕೋರಲು ಮತ್ತು ತಕ್ಷಣ ರೂ.30.00 |

| | | | |
|---|---|---|---|
| | | • ಜಿಲ್ಲೆಯಾದ್ಯಂತ ಮೂಲಭೂತ ಸೌಕರ್ಯಗಳಲ್ಲಿ ಆದ ಅಂದಾಜು ನಷ್ಟ ರೂ.1624.00ಲಕ್ಷಗಳಾಗಿರುತ್ತವೆ.<br>• ಮನೆ, ಬೆಳೆ, ಜಾನುವಾರುಗಳಿಗೆ ಉಂಟಾದ ಅಂದಾಜು ನಷ್ಟ ರೂ.912.010ಲಕ್ಷಗಳಾಗಿರುತ್ತವೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರಾದ ಶ್ರೀ ಹೆಚ್.ಎಸ್.ಶಂಕರ್ ರವರು ಮಾತನಾಡುತ್ತಾ, ಕಟ್ಟೇಪುರದಿಂದ ಕೇರಳಾಪುರದವರೆಗೆ ಸೇತುವೆಗಳು ಬಿದ್ದು ಹೋಗಿರುತ್ತವೆ. ರಸ್ತೆಗಳೂ ಸಹ ಹಾನಿಯಾಗಿರುತ್ತವೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಸಿ.ಎಸ್.ಪ್ರಕಾಶ್ ರವರು ಮಾತನಾಡುತ್ತಾ, ಬೇಲೂರು ತಾಲ್ಲೂಕಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ರಸ್ತೆಗಳು ಹಾಳಾಗಿರುತ್ತವೆ.<br>ಮಾನ್ಯ ಸದಸ್ಯರಾದ ಶ್ರೀ ಪರ್ವತಯ್ಯರವರು ಮಾತನಾಡುತ್ತಾ, ಸಕಲೇಶಪುರ ತಾಲ್ಲೂಕಿನಲ್ಲಿ ಕಾಫಿ, ಶುಂಠಿ ಬೆಳೆಗಳು ಹಾನಿಯಾಗಿರುತ್ತವೆ. ರಸ್ತೆಗಳೂ ಸಹ ಹಾಳಾಗಿರುತ್ತವೆ ಎಂದು ಸಭೆಗೆ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಪ್ರೇಮಾ ನಿಂಗಪ್ಪರವರು ಮಾತನಾಡುತ್ತಾ, ಅರಸೀಕೆರೆ ತಾಲ್ಲೂಕಿನಲ್ಲಿ ಹೆಚ್ಚಿನ ಮಳೆಯಿಂದ ರಸ್ತೆಗಳು ಹಾಳಾಗಿರುತ್ತವೆ ಎಂದು ತಿಳಿಸಿದರು.<br>ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಹೆಚ್.ಡಿ.ರೇವಣ್ಣರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಮರಣ ಹೊಂದಿರುವ 6 ಜನರಿಗೆ ಏನು ಪರಿಹಾರ ನೀಡಲಾಗಿದೆ ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಪ್ರತಿನಿಧಿ, ಜಿಲ್ಲಾಧಿಕಾರಿಯವರ ಕಛೇರಿ, ಇವರು ಉತ್ತರಿಸುತ್ತಾ, ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಮರಣ ಹೊಂದಿರುವ 6 ಜನರ ಪೈಕಿ 5 ಜನರಿಗೆ ರೂ.1.00ಲಕ್ಷಗಳಂತೆ ಪರಿಹಾರ ಧನವನ್ನು ನೀಡಲಾಗಿದ್ದು, ಇನ್ನು ಒಬ್ಬರಿಗೆ ಪರಿಹಾರವನ್ನು ನೀಡಬೇಕಾಗಿರುತ್ತದೆ ಮತ್ತು ಪ್ರಕೃತಿ ವಿಕೋಪದಡಿ ಪ್ರತಿ ತಾಲ್ಲೂಕಿಗೆ ರೂ.25.00ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ ಎಂದು ವಿವರ ನೀಡಿದರು.<br>ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಹೆಚ್.ಡಿ.ರೇವಣ್ಣರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಹಾಸನ ಮತ್ತು ಚನ್ನರಾಯಪಟ್ಟಣ ವಿಭಾಗಗಳಲ್ಲಿ ಹಾಳಾಗಿರುವ ರಸ್ತೆ, ಸೇತುವೆ, ಕೆರೆಗಳು, ಮನೆಗಳು, ಶಾಲಾ ಕಟ್ಟಡಗಳು, ಅಂಗನವಾಡಿ ಕಟ್ಟಡಗಳ ಬಗ್ಗೆ ಪೂರ್ಣ ವಿವರಗಳು ಮತ್ತು ಅಂದಾಜು ನಷ್ಟದ ಬಗ್ಗೆ ವಿವರಗಳನ್ನು ನೀಡಬೇಕೆಂದು ಕೋರಿದರು.<br>ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣರವರು ಉತ್ತರಿಸುತ್ತಾ, ಜಿಲ್ಲೆಯಲ್ಲಿ ಎರಡೂ ವಿಭಾಗಗಳಿಂದ ಸುಮಾರು 600 ಕಿ.ಮೀ ರಸ್ತೆಗಳು | ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

<table>
<tr><td></td><td></td><td>ಹಾಳಾಗಿದ್ದು, ರೂ.12.00ಕೋಟಿಗಳ ನಷ್ಟವಾಗಿರುತ್ತದೆ ಎಂದು ಅಂದಾಜಿಸಲಾಗಿದೆ ಎಂದು ವಿವರ ನೀಡಿದರು.<br><br>ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಹಾಸನ ಇವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಗೆ ವ್ಯಾಪ್ತಿಯಲ್ಲಿ ಬರುವ ರಸ್ತೆಗಳಲ್ಲಿ ರೂ.10.00ಕೋಟಿಗಳಷ್ಟು ಹಾನಿಯಾಗಿರುತ್ತದೆ ಎಂದು ಅಂದಾಜಿಸಲಾಗಿದೆ ಎಂದು ವಿವರ ನೀಡಿದರು.<br>ಕೆರೆಗಳಿಗೆ ಸಂಬಂಧಿಸಿದಂತೆ, ಎರಡೂ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಂದ ಸುಮಾರು ರೂ.6.00ಕೋಟಿಗಳಷ್ಟು ಹಾನಿಯಾಗಿರುತ್ತದೆ ಎಂದು ಅಂದಾಜಿಸಲಾಗಿದೆ ಎಂದು ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರು ವಿವರ ನೀಡಿದರು.<br>ಕಾರ್ಯಪಾಲಕ ಅಭಿಯಂತರರು, ಸಣ್ಣ ನೀರಾವರಿ ಇಲಾಖೆರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ಸುಮಾರು ರೂ.4.00ಕೋಟಿಗಳಷ್ಟು ಹಾನಿಯಾಗಿರುತ್ತದೆ ಎಂದು ಅಂದಾಜಿಸಲಾಗಿದೆ ಎಂದು ವಿವರ ನೀಡಿದರು.<br>ಜಿಲ್ಲೆಯಲ್ಲಿ 1200 ಮನೆಗಳು ಸಂಪೂರ್ಣವಾಗಿ ಹಾನಿಗೀಡಾಗಿದ್ದು, ರೂ.7.00ಕೋಟಿಗಳಷ್ಟು ನಷ್ಟವುಂಟಾಗಿರುತ್ತದೆ ಎಂದು ಅಂದಾಜಿಸಲಾಗಿದೆ.<br>ಆದ್ದರಿಂದ, ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಉಂಟಾಗಿರುವ ಹಾನಿಗೆ ಸಂಬಂಧಿಸಿದಂತೆ, ಅಗತ್ಯ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಎಲ್ಲಾ ಸದಸ್ಯರುಗಳು ಒಕ್ಕೊರಲಿನಿಂದ ತಮ್ಮ ಸಹಮತವನ್ನು ವ್ಯಕ್ತಪಡಿಸಿದರು.</td><td></td></tr>
<tr><td>2</td><td>ಕುಡಿಯುವ ನೀರಿನ ಯೋಜನೆ ಬಗ್ಗೆ.</td><td>ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರಾದ ಶ್ರೀ ಎ.ಇ.ಚಂದ್ರಶೇಖರ್ ಉ: ಅಣತಿ ಶೇಖರಣ್ಣ ರವರು ಮಾತನಾಡುತ್ತಾ, 2009-10ನೇ ಸಾಲಿನ ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದಂತೆ, ಜಿಲ್ಲಾ ಪಂಚಾಯಿತಿಯಿಂದ ರೂ.9.98ಕೋಟಿಗಳಿಗೆ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಸರ್ಕಾರದ ಅನುಮೋದನೆಗೆ ಸಲ್ಲಿಸಲಾಗಿದ್ದು, ಸರ್ಕಾರದಿಂದ ಅನುಮೋದನೆ ನೀಡಿರುವುದಿಲ್ಲ. ಇದರಿಂದ,ಕೊಳವೆ ಬಾವಿ ಕೊರೆದಿರುವ ಗುತ್ತಿಗೆದಾರರು ತುಂಬಾ ಸಂಕಷ್ಟಕ್ಕೀಡಾಗಿದ್ದಾರೆ. ಆದ್ದರಿಂದ, ಅವರಿಗೆ ಅತೀ ತುರ್ತಾಗಿ ಹಣವನ್ನು ನೀಡಬೇಕಾಗಿರುತ್ತದೆ. ಈ ಬಗ್ಗೆ ಏನು ಕ್ರಮ ವಹಿಸಲಾಗಿದೆ ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಸರ್ಕಾರದಿಂದ, ರೂ.2.20ಕೋಟಿಗಳಿಗೆ ಅನುಮೋದನೆ ದೊರೆತಿದ್ದು, ಇನ್ನು 2-3 ದಿನಗಳಲ್ಲಿ ಜಿಲ್ಲಾ ಪಂಚಾಯಿತಿಗೆ ಅನುದಾನ ಬಿಡುಗಡೆಯಾಗಲಿದ್ದು,</td><td>ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>2009-10ನೇ ಸಾಲಿನಲ್ಲಿ ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದಂತೆ, ಸರ್ಕಾರದಿಂದ ಬಿಡುಗಡೆಯಾಗುವ 2.20ಕೋಟಿ ಅನುದಾನ ವನ್ನು ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ಬಿಡುಗಡೆ ಮಾಡಲು ಮತ್ತು ಸದರಿ</td></tr>
</table>

| | | | |
|---|---|---|---|
| | | ಅನುದಾನ ಬಂದ ನಂತರ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣಗಳಿಗೆ ಬಿಡುಗಡೆ ಮಾಡಲಾಗುವುದು ಎಂದು ವಿವರ ನೀಡಿದರು. | ಅನುದಾನದಲ್ಲಿ ಕೊಳವೆ ಬಾವಿ ಕಾಮಗಾರಿಗಳಿಗೆ ವಿನಿಯೋಗ ಮಾಡಲು ಕ್ರಮ ವಹಿಸುವಂತೆ ತಿಳಿಸಲಾಯಿತು. |
| 3 | ಅತಿವೃಷ್ಟಿಯಿಂದ ಒಡೆದು ಹೋಗಿರುವ ಕೆರೆಗಳ ದುರಸ್ಥಿಗೆ ಅನುದಾನ ಬಿಡುಗಡೆ ಮಾಡುವಂತೆ ಕೋರಿ | ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಹೆಚ್ಚಿನ ಕೆರೆಗಳು ಒಡೆದು ಹೋಗಿ, ಅಪಾರ ನಷ್ಟವುಂಟಾಗಿರುತ್ತದೆ. ಆದ್ದರಿಂದ, ಕೆರೆಗಳ ದುರಸ್ಥಿಗೆ ಪ್ರಕೃತಿ ವಿಕೋಪದಡಿ ಲಭ್ಯವಿರುವ ಅನುದಾನದಲ್ಲಿ ಪ್ರತಿ ಜಿಲ್ಲಾ ಪಂಚಾಯಿತಿ ಕ್ಷೇತ್ರಕ್ಕೆ ರೂ.5.00ಲಕ್ಷಗಳಂತೆ ಬಿಡುಗಡೆ ಮಾಡುವಂತೆ ಕೋರಿ ಜಿಲ್ಲಾಧಿಕಾರಿಯವರಿಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಒಡೆದು ಹೋಗಿರುವ ಕೆರೆಗಳನ್ನು ದುರಸ್ಥಿಪಡಿಸಲು ಪ್ರಕೃತಿ ವಿಕೋಪದಡಿ ಲಭ್ಯವಿರುವ ಅನುದಾನದಲ್ಲಿ ರೂ.5.00ಲಕ್ಷಗಳಂತೆ ಪ್ರತಿ ಜಿಲ್ಲಾ ಪಂಚಾಯಿತಿ ಕ್ಷೇತ್ರಕ್ಕೆ ಅನುದಾನವನ್ನು ಬಿಡುಗಡೆ ಮಾಡುವಂತೆ ಜಿಲ್ಲಾಧಿಕಾರಿಯವರಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| | | ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | |

Mahadevamma.
(ಮಹದೇವಮ್ಮ),
ಅಧ್ಯಕ್ಷರು,
ಜಿಲ್ಲಾ ಪಂಚಾಯತ್, ಹಾಸನ.